ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ,
ಕುಂದಾಪುರ

ಸಿ.ಸಿ. ನಂಬ್ರ:1255/2016

ಚಾಸಾ: 3 ಪ್ರಾಸಾ:2

ದಿನಾಂಕ: 29.05.2024

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ರೋಸಿ ಫೆರ್ನಾಂಡಿಸ್ |
| ಗಂಡನ ಹೆಸರು | : | ಬಲ್ತಾಜಾ ಫೆರ್ನಾಂಡಿಸ್ |
| ವಯಸ್ಸು | : | 49 ವರ್ಷ |
| ಉದ್ಯೋಗ | : | ಗೃಹಿಣಿ |
| ವಾಸ ಸ್ಥಳ | : | ಗಂಗೊಳ್ಳಿ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಪ್ರಾಸಾ-1 ನಮ್ಮ ಪಕ್ಕದ ಮನೆಯವರು. ನ್ಯಾಯಾಲಯದ ಮುಂದೆ ಇರುವ ಆರೋಪಿಯ ಪರಿಚಯವಿದೆ. ಆತ ಗಂಗೊಳ್ಳಿ ಪಂಚಾಯಿತಿಯ ಸಿಬ್ಬಂದಿ. ಘಟನೆಯ ಬಗ್ಗೆ ನನಗೇನು ಗೊತ್ತಿಲ್ಲ. ಪೊಲೀಸ್ ಠಾಣೆಯಲ್ಲಿ ಪಂಚನಾಮೆಗೆ ಸಹಿ ಮಾಡಿದ್ದೇನೆ ಆದರೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 08-07-2015 ರಂದು ಗ್ರಾಮ ಪಂಚಾಯಿತಿಯ ಕಚೇರಿಯಲ್ಲಿರುವ ಗ್ರಾಮ ಕರಣೀಕರ ಕೋಣೆಯಲ್ಲಿ ಜರುಗಿಸಿದ ಪಂಚನಾಮೆಗೆ ನಾನು ಹಾಜರಿದ್ದೆ ಎಂದರೆ ಸರಿ. ಘಟನಾ ಸ್ಥಳವನ್ನು ಪ್ರಾಸಾ-1 ರವರು ತೋರಿಸಿದ್ದರು ಎಂದರೆ ನನಗೆ ನೆನಪಿಲ್ಲ. ಪೊಲೀಸರು ಸ್ಥಳ ಪರಿಶೀಲನೆ ಮಾಡಿದ್ದರು ಎಂದರೆ ಸರಿಯಲ್ಲ. ಸದ್ರಿ ಸ್ಥಳದಲ್ಲಿ ಪೊಲೀಸರು ಪಂಚನಾಮೆ

ಜರುಗಿಸಿದ ನಂತರ ನಿಪಿ-2 ನ್ನು ಓದಿ ಹೇಳಿ ನನ್ನ ಸಹಿ ಪಡೆದರು ಎಂದರೆ ಸಾಕ್ಷಿಯು ಸಹಿ ಮಾಡಿರುತ್ತೇನೆ ಎಂದು ಉತ್ತರಿಸಿರುತ್ತಾರೆ. ಪಂಚನಾಮೆಯನ್ನು ಮಧ್ಯಾಹ್ನ 12-15 ರಿಂದ 1 ಗಂಟೆಯವರೆಗೆ ಜರುಗಿಸಿದ್ದರು ಎಂದರೆ ನನಗೆ ನೆನಪಿಲ್ಲ. ಆ ಕಾಲಕ್ಕೆ ನಿಪಿ-3 ನ್ನು ತೆಗೆಯಲಾಯಿತು ಎಂದರೆ ಸರಿ. ಈ ಬಗ್ಗೆ ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಗೆ ದಿಃ 08-07-2015 ರ ಭಾಗಶಃ ಹೇಳಿಕೆಯನ್ನು ಓದಿ ಹೇಳಲಾಗಿ ಅದನ್ನು ಆಕೆ ಒಪ್ಪಿರುವುದಿಲ್ಲ. ಸದ್ರಿ ಭಾಗವನ್ನು ನಿಪಿ-6 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಆರ್ ಎಂ ಎಸ್ ರವರಿಂದಃ**

ನಿಪಿ-2 ರಲ್ಲಿ ಏನು ಬರೆದಿದೆ ಎಂದು ನನಗೆ ತಿಳಿದಿಲ್ಲ ಎಂದರೆ ಸರಿ. ಪೊಲೀಸರ ನಿರ್ದೇಶನದ ಮೇರೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ. ನಿಪಿ-3 ನ್ನು ಯಾವ ಕಾರಣಕ್ಕೆ ತೆಗೆಯಲಾಯಿತು ಎಂದು ನನಗೆ ತಿಳಿದಿಲ್ಲ. ಪೊಲೀಸರ ಕೋರಿಕೆ ಮೇರೆಗೆ ನಾನು ಅದರಲ್ಲಿ ನಿಂತಿರುತ್ತೇನೆ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**